**All India Radio: Bangalore**
**Regional Bulletin In Kannada**
**23.01.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.01.2025 / 6.40 p.m.**
***************

ಮುಖ್ಯಾಂಶಗಳು

೧. ಮುಂದಿನ ಆರ್ಥಿಕ ವರ್ಷದಿಂದ ಎಪಿಎಂಸಿಗಳಲ್ಲಿ ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ವ್ಯವಸ್ಥೆ- ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

೨. ನ; ಒಂದು ಸಾವಿರದ ೨೭೪ ಕೋಟಿ ವೆಚ್ಚದಲ್ಲಿ ಕೃಷಿಗೆ ನೀರಾವರಿ ಪೂರಕ ಯೋಜ ಸಿದ್ಧಪಡಿಸಿದ ಸರ್ಕಾರ

೩. ಲೋಕಾಯುಕ್ತ ಪೊಲೀಸರಿಂದ ಮುಡಾ ಪ್ರಕರಣ ಮುಚ್ಚಿ ಹಾಕಲು ಪ್ರಯತ್ನ - ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ

೪. ಶಿವಮೊಗ್ಗದಲ್ಲಿ ಪ್ರತ್ಯೇಕ ಎಫ್‌ಎಂ ಸ್ಟುಡಿಯೊ ಸ್ಥಾಪನೆ - ಕೇಂದ್ರ ಸಚಿವ ಡಾ.ಎಲ್.ಮುರುಗನ್ ಭರವಸೆ

೫. ಬೆಂಗಳೂರು ವಿಮಾನ ನಿಲ್ದಾಣಕ್ಕೆ 'ಎಸಿಐ'ನಿಂದ ಪ್ರತಿಷ್ಠಿತ ಪ್ರವೇಶ ವರ್ಧಕ ಮಾನ್ಯತೆ

***************

ಮುಂದಿನ ಆರ್ಥಿಕ ವರ್ಷದಿಂದ ರಾಜ್ಯದ ಸಾವಯವ ಉತ್ಪನ್ನಗಳ ಮಾರಾಟಕ್ಕೆ ಎಪಿಎಂಸಿಗಳಲ್ಲಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಅಂತಾರಾಷ್ಟ್ರೀಯ ವಾಣಿಜ್ಯ ಮೇಳ ಸಾವಯವ ಮತ್ತು ಸಿರಿಧಾನ್ಯ ೨೦೨೫ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯಲ್ಲಿ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಸೇರಿದಂತೆ ಒಂದು ಸಂಯೋಜಿತ ಕೃಷಿ ವಿಶ್ವವಿದ್ಯಾಲಯ ಸ್ಥಾಪಿಸಲು ತೀರ್ಮಾನಿಸಲಾಗಿದ್ದು, ಇದರಿಂದ ಮಂಡ್ಯ, ಹಾಸನ, ಮೈಸೂರು ಚಾಮರಾಜನಗರ ಭಾಗದ ರೈತರಿಗೆ ಸಾವಯವ ಹಾಗೂ ಸಿರಿಧಾನ್ಯ ಕೃಷಿಗೆ ಮಾರ್ಗದರ್ಶನ ಹಾಗೂ ಪ್ರೋತ್ಸಾಹ ದೊರೆಯಲಿದೆ ಎಂದು ತಿಳಿಸಿದ್ದಾರೆ.

ರಾಗಿ ತಿಂದವನು ನಿರೋಗಿ ಎಂಬಂತೆ, ಸಿರಿಧಾನ್ಯಗಳ ಸೇವನೆ ಆರೋಗ್ಯಕ್ಕೆ ಉತ್ತಮವಾಗಿದೆ ಎಂದು ತಿಳಿಸಿದ್ದಾರೆ.

ರೈತರ ಹಲವು ದಿನಗಳ ಬೇಡಿಕೆಯಾದ ಕನಿಷ್ಟ ಬೆಂಬಲ ಬೆಲೆ ಯೋಜನೆಯನ್ನು ಜಾರಿಗೆ ತರಬೇಕೆಂದು ಕೇಂದ್ರಸರ್ಕಾರವನ್ನು ಮುಖ್ಯಮಂತ್ರಿ ಒತ್ತಾಯಿಸಿದರು.

ಇದೇ ವೇಳೆ ಮಾತನಾಡಿದ ಉಪಮುಖ್ಯಂತ್ರಿ ಡಿ ಕೆ ಶಿವಕುಮಾರ್ "ಸಾವಯವ ಕೃಷಿ ಮತ್ತು ಸಿರಿಧಾನ್ಯ ಕೃಷಿಗೆ ಹೆಚ್ಚಿನ ಮಹತ್ವ ನೀಡಿದರೆ ರೈತರ ಬದುಕು ಹಾಗೂ ಜನರ ಆರೋಗ್ಯವನ್ನು ಕಾಪಾಡಬಹುದು" ಎಂದು ಎಂದಿದ್ದಾರೆ.

***************

ನೀರಾವರಿಗೆ ಸರ್ಕಾರ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿದ್ದು, ೧೨೭೪ ಕೋಟಿ ರೂಪಾಯಿ ವೆಚ್ಚದಲ್ಲಿ ಹೊಸ ಯೋಜನೆಯನ್ನು ಸಿದ್ಧಪಡಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಾಣಿವಿಲಾಸ ಜಲಾಶಯಕ್ಕೆ ಬಾಗಿನ ಅರ್ಪಿಸಿದ ಬಳಿಕ ಮಾತನಾಡಿದ ಅವರು, ಇದು ಜಾರಿ ಆದರೆ ಬಯಸಲು ಸೀಮೆ ಭಾಗದ ಕಟ್ಟ ಕಡೆಯ ಜಮೀನಿಗೂ ನೀರು ಒದಗಲಿದೆ ಎಂದು ಹೇಳಿದ್ದಾರೆ.

ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಜೊತೆ ಚರ್ಚಿಸಿ ಬಿಜೆಪಿ ಕೊಟ್ಟ ಮಾತಿನಂತೆ ೫೩೦೦ ಕೋಟಿ ರೂಪಾಯಿ ಬಿಡುಗಡೆ ಮಾಡಿಸುವಂತೆ ಸಂಸದ ಗೋವಿಂದ ಕಾರಜೋಳ ಅವರಿಗೆ ತಿಳಿಸಿದ್ದಾರೆ.

***************

ಲೋಕಾಯುಕ್ತ ಪೊಲೀಸರಿಂದ ಮುಡಾ ಪ್ರಕರಣವನ್ನು ಮುಚ್ಚಿ ಹಾಕುವ ಪ್ರಯತ್ನ ನಡೆಯುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಲೀನ್‌ಚಿಟ್ ಸಿಗುವುದು ಖಚಿತವಾಗಿದ್ದು, ಇದನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಒತ್ತಾಯಿಸಿದ್ದಾರೆ.

ಮುಡಾ ಹಗರಣ ವಿರುದ್ಧ ಬಿಜೆಪಿ ಹೋರಾಟ ಮುಂದುವರೆಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಶಿವಮೊಗ್ಗದಲ್ಲಿ ಎಫ್‌ಎಂ ಮರುಪ್ರಸಾರ ಟ್ರಾನ್ಸ್‌ಮೀಟರ್ ಸ್ಥಾಪನೆಯಾಗಿದ್ದು, ಇಲ್ಲಿ ಪ್ರತ್ಯೇಕ ಸ್ಟುಡಿಯೋ ಸ್ಥಾಪಿಸಲಾಗುವುದು ಎಂದು ಕೇಂದ್ರ ಸಚಿವ ಡಾ. ಎಲ್. ಮುರುಗನ್ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿಂದು ಭದ್ರಾವತಿ ಆಕಾಶವಾಣಿಯ ೧೦ ಕಿಲೋವ್ಯಾಟ್ ಎಫ್ ಎಂ ಟ್ರಾನ್ಸ್‌ಮೀಟರ್‌ಗೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಇದಕ್ಕಾಗಿ ಕೇಂದ್ರ ಸರ್ಕಾರ ಹಣಕಾಸು ನೆರವು ನೀಡಿದೆ ಎಂದು ತಿಳಿಸಿದ್ದಾರೆ.

ಈ ಟ್ರಾನ್ಸ್‌ಮೀಟರ್‌ನಿಂದ ಆಕಾಶವಾಣಿ ಭದ್ರಾವತಿ ವ್ಯಾಪ್ತಿಯು ಶಿವಮೊಗ್ಗ, ದಾವಣಗೆರೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳನ್ನು ಒಳಗೊಂಡಂತೆ ೭೦ ಕಿಲೋಮೀಟರ್‌ಗೂ ಹೆಚ್ಚು ವಿಸ್ತರಿಸಲಿದೆ. ಕರ್ನಾಟಕದ ಸಾಂಸ್ಕೃತಿಕ ಮತ್ತು ಮಾಹಿತಿ ಪ್ರಸಾರ ಕ್ಷೇತ್ರದಲ್ಲಿ ಇದು ಹೊಸ ಮೈಲಿಗಲ್ಲಾಗಲಿದೆ ಎಂದು ಹೇಳಿದ್ದಾರೆ.

ಧ್ವನಿ: ಮುರುಗನ್

ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ, ನೂತನ ಟ್ರಾನ್ಸ್‌ಮೀಟರ್‌ನಿಂದ ೭೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಾರ್ಯಕ್ರಮ ಕೇಳಬಹುದಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ: ರಾಘವೇಂದ್ರ

***************

ದೇಶದ ಮೆಶೀನ್ ಟೂಲ್ ಉತ್ಪಾದನೆಯಲ್ಲಿ ರಾಜ್ಯವು ಶೇಕಡ ೫೨ರಷ್ಟು ಪಾಲು ಹೊಂದಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಬೆಂಗಳೂರಿನ ತುಮಕೂರು ರಸ್ತೆಯಲ್ಲಿರುವ ಅಂತರರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರದಲ್ಲಿ ನಡೆಯುತ್ತಿರುವ ಮಶೀನ್ ಟೂಲ್ ಮತ್ತು ಮ್ಯಾನುಫ್ಯಾಕ್ಚರಿಂಗ್ ವಾಣಿಜ್ಯ ಮೇಳ ಇಮ್ಟೆಕ್ಸ್-೨೦೨೫ರ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಸರಕಾರವು ಇವುಗಳ ಬಲವರ್ಧನೆಗೆ ನಿರ್ದಿಷ್ಟ ದೂರದೃಷ್ಟಿಯುಳ್ಳ ತಂಡ ರಚಿಸಿದೆ ಎಂದು ಹೇಳಿದ್ದಾರೆ.

ಮಶೀನ್ ಟೂಲ್ ಪಾರ್ಕ್ ತುಮಕೂರಿನಲ್ಲಿದ್ದು, ಇದು ೫೩೦ ಎಕರೆ ವಿಸ್ತಾರವಾಗಿದೆ. ಇಲ್ಲಿ ರಾಜ್ಯ ಸರಕಾರವು ವಿಶ್ವದರ್ಜೆಯ ಮೂಲಸೌಕರ್ಯಗಳನ್ನು ಒದಗಿಸಿದ್ದು, ದೇಶ-ವಿದೇಶಗಳ ಹೂಡಿಕೆದಾರರನ್ನು ಇದು ಆಕರ್ಷಿಸುತ್ತಿದೆ ಎಂದು ಹೇಳಿದ್ದಾರೆ.

ಈ ವಲಯಗಳಲ್ಲಿ ಭಾರತವು ಉತ್ಪಾದನೆಯಲ್ಲಿ ೯ನೇ ಸ್ಥಾನದಲ್ಲೂ, ಬಳಕೆಯಲ್ಲಿ ೭ನೇ ಸ್ಥಾನದಲ್ಲೂ ಇದೆ.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರೂ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

***************

ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳ ಮಂಡಳಿ ಕೊಡಮಾಡುವ "ಪ್ರವೇಶ ವರ್ಧಕ ಮಾನ್ಯತೆ" ಪಡೆದ ದೇಶದ ಮೊದಲ ವಿಮಾನ ನಿಲ್ದಾಣ ಎಂಬ ಹೆಗ್ಗಳಿಕೆಗೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪಾತ್ರವಾಗಿದೆ.

ಬೆಂಗಳೂರು ವಿಮಾನ ನಿಲ್ದಾಣದಲ್ಲಿ ವಿಶೇಷ ಚೇತನರು ಹಾಗೂ ಹಿರಿಯ ನಾಗರಿಕರು ಸುಲಲಿತವಾಗಿ ಸಂಚರಿಸಲು ಹಾಗೂ ಇತರ ಸೌಲಭ್ಯಗಳನ್ನು ಸರಳವಾಗಿ ಬಳಸಿಕೊಳ್ಳಲು ಸೂಕ್ತ ವ್ಯವಸ್ಥೆ ನಿರ್ಮಿಸಲಾಗಿದೆ. ವಿಶೇಷ ಚೇತನರು ಹಾಗೂ ಹಿರಿಯ ನಾಗರಿಕರ ಅಗತ್ಯತೆಗಳನ್ನು ಪೂರೈಸುವ ಉದ್ದೇಶದಿಂದ ವಿಮಾನ ನಿಲ್ದಾಣದಲ್ಲಿ ಅಗತ್ಯ ಸೌಕರ್ಯ ಒದಗಿಸುವ ಎಇಎ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ. ಇದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಎಇಎ ಮಾನ್ಯತೆ ಪಡೆಯಲು ಕಾರಣವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

***************

ಜನವರಿ ೨೬ರಂದು ನವದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವಕ್ಕೆ ಭಾಗವಹಿಸಲು ಚಿತ್ರದುರ್ಗದ ಮೂವರು ಕೃಷಿಕರನ್ನು ಆಹ್ವಾನಿಸಲಾಗಿದೆ.

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ಪರಷರಾಂಪುರ ಹೋಬಳಿ ಓಬಳ್ಳಾಪುರ ನಿವಾಸಿ ರೈತ ಮಹಿಳೆ ವೀಣಾ ಅವರನ್ನು ಅಟಲ್ ಭೂಜಲ ಯೋಜನೆಯಲ್ಲಿ ಮಾಡಿದ ಸಾಧನೆಯಿಂದ ಗುರುತಿಸಲಾಗಿದೆ.

ಚಳ್ಳಕೆರೆ ತಾಲೂಕಿನ ತಳುಕು ಗುಡಿಹಳ್ಳಿ ಗ್ರಾಮದ ರಂಗಪ, ನೈಸರ್ಗಿಕ ಜಲ ಮೂಲದಿಂದ ಮಿತ ನೀರಿನಿಂದ ಬೆಳೆಗಳನ್ನು ಬೆಳೆದು ಸಾಧನೆ ಮಾಡಿದ್ದಾರೆ.

ದೊಡ್ಡಚೆಲ್ಲೂರು ಗ್ರಾಮದ ಅರುಣಾ ಸ್ವಸಹಾಯ ಸಂಘದ ಸದಸ್ಯರಾಗಿ ಸಾವಯವ ವಿಷಮುಕ್ತ ಬೆಳೆ ಬೆಳೆಯುವ ಬಗ್ಗೆ ರೈತರಿಗೆ ಜಾಗೃತಿ ಮೂಡಿಸಿದ ಹಿನ್ನಲೆಯಲ್ಲಿ ಗಣರಾಜ್ಯೋತ್ಸ ಕಾರ್ಯಕ್ರಮಕ್ಕೆ ಕರೆಯೋಲೆ ದೊರೆತಿದೆ.

ಧ್ವನಿ: ಅರುಣಾ

***************

ದುಬೈ ಪ್ರಯಾಣದ ಇತಿಹಾಸ ಹೊಂದಿರುವ ಬೆಂಗಳೂರಿನ ೪೦ ವರ್ಷದ ವ್ಯಕ್ತಿಯಲ್ಲಿ ಎಂಪಾಕ್ಸ್ ಕಂಡು ಬಂದಿದ್ದು, ಬೆಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಇದು ೨೦೨೫ ರ ಮೊದಲ ಪ್ರಕರಣವಾಗಿದೆ. ಆಫ್ರಿಕಾದ ಸುಮಾರು ೧೫ ದೇಶಗಳು ಮಾರಕ ಸೋಂಕಿನೊಂದಿಗೆ ಹೋರಾಡುತ್ತಿವೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೋಲೀಸ್ ವತಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಸ್ತೆ ಸುರಕ್ಷತೆ ಕುರಿತ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾಧಿಕಾರಿ ಡಾ.ಎನ್.ಶಿವಶಂಕರ್ ಮಾತನಾಡಿ, ಹೆದ್ದಾರಿಗಳಲ್ಲಿ ಅಪಘಾತ ತಡೆಯಲು ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು. ವೇಗಮಿತಿ ನಿಯಂತ್ರಣಕ್ಕೆ ಎ.ಎನ್.ಪಿ,ಆರ್ ಕ್ಯಾಮರಾ ಅಳವಡಿಸಲು ಹಾಗೂ ಸೂಚನಾ ಫಲಕಗಳನ್ನು ಹಾಕುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಹೇಳಿದರು.

***************

ಜನನ-ಮರಣ ನೋಂದಣಿಯಲ್ಲಿ ಅಕ್ಷರ ದೋಷವಾಗದಂತೆ ನಿಗಾವಹಿಸಲು ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ದಿನಾಂಕ, ಹೆಸರು, ತಂದೆ, ತಾಯಿ, ಗಂಡ, ಹೆಂಡತಿ ಹೆಸರುಗಳಲ್ಲಿ ಅಕ್ಷರ ದೋಷಗಳು ಹೆಚ್ಚಾಗುತ್ತಿವೆ. ಲಿಂಗ ಕಾಲಂನಲ್ಲಿ ಗಂಡು ಅಥವಾ ಹೆಣ್ಣು ಎಂಬುದು ನಮೂದಾಗದೇ ಇರುವುದು ಅನೇಕ ಜನರಿಗೆ ಸಮಸ್ಯೆಗಳಾಗಿವೆ. ಪೂರ್ಣ ಪ್ರಮಾಣದಲ್ಲಿ ಅರ್ಜಿದಾರರಿಂದ ಮಾಹಿತಿ ಮತ್ತು ವರದಿ ನಮೂನೆಗಳಾದ ಜನನ ವರದಿ-೧, ಮರಣ ವರದಿ-೨ ರಲ್ಲಿ ನೀಡಿದ ಮಾಹಿತಿಯನ್ನು ಜಾಗೂರಕತೆಯಿಂದ ನೋಂದಾಯಿಸಲು ಕ್ರಮ ವಹಿಸಬೇಕೆಂದು ತಿಳಿಸಿದ್ದಾರೆ.

***************

ಸಂಕ್ಷಿಪ್ತ ಸುದ್ದಿಗಳು

೧. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ರಾಜ್ಯದಲ್ಲಿ ಅಭಿವೃದ್ಧಿ ಸ್ಥಗಿತಗೊಳಿಸಿದೆ ಎಂದು ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ ಬೆಳಗಾವಿಯಲ್ಲಿಂದು ಆರೋಪಿಸಿದ್ದಾರೆ.

೨. ಕೇಂದ್ರ ಸರ್ಕಾರದ ಮುದ್ರಾ ಯೋಜನೆ, ಜನ್ ಧನ್ ಯೋಜನೆ, ಸೇರಿದಂತೆ ಯುವಜನರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಯೋಜನೆಗಳ ಪ್ರಗತಿ ಗುರಿ ಸಾಧನೆಯನ್ನು ಶೇಕಡ ೧೦೦ ರಷ್ಟು ಮಾಡಬೇಕು ಎಂದು ಬ್ಯಾಂಕ್ ಅಧಿಕಾರಿಗಳಿಗೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ.ಕೆ.ಸುಧಾಕರ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

೩. ದೇಶದ ಭವಿಷ್ಯ ಆಗಿರುವ ಮಕ್ಕಳು ಸುಭಾಷ್ ಚಂದ್ರ ಬೋಸರ ಆದರ್ಶಗಳನ್ನು ಮೈಗೂಡಿಸಿಕೊಂಡು ಭವ್ಯ ಭಾರತ ಕಟ್ಟಬೇಕೆಂದು ಅಂತರಾಷ್ಟ್ರೀಯ ಜಾನಪದ ಗಾಯಕ ಮತ್ತಿಕುಂಟೆ ಕೃಷ್ಣ ಕೋಲಾರದಲ್ಲಿ ಕರೆ ನೀಡಿದ್ದಾರೆ.

೪. ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಸುತ್ತೂರು ಮಠದಲ್ಲಿ ಇದೇ ೨೬ ರಿಂದ ೩೧ ರ ವರಗೆ ಜಾತ್ರಾ ಮಹೋತ್ಸವ ಜರುಗಲಿದೆ.

೫. ಬಹುತೇಕ ರೈತರು  ರಾಸಾಯನಿಕ ಗೊಬ್ಬರದ ಬಳಕೆ ಮಾಡುವುದರಿಂದ ಭೂಮಿ ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತಿದೆ ಎಂದು  ಕಪ್ಪತ್ತಗುಡ್ಡದ ನಂದಿವೇರಿ ಮಠದ ಶಿವಕುಮಾರ ಶ್ರೀಗಳು ಗದಗದಲ್ಲಿ ತಿಳಿಸಿದ್ದಾರೆ.

೬. ಕಾಯಕಯೋಗಿ ಶಿವಶರಣ ಶ್ರೀ ಸಿದ್ದರಾಮೇಶ್ವರರ ಸಮಾಜಮುಖಿ ಕಾರ್ಯಗಳು ಮತ್ತು ಚಿಂತನೆಗಳು ಅನುಕರಣೀಯ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

೭. ಗದಗ ಜಿಲ್ಲೆಯ ಲಕ್ಷ್ಮೇಶ್ವರದಲ್ಲಿ ಕಾಯಕಯೋಗಿ ಶಿವಯೋಗಿ ಗುರು ಶ್ರೀ ಸಿದ್ದರಾಮೇಶ್ವರರ ೮೫೧ ನೇಯ ಜಯಂತ್ಯೋತ್ಸವ ಕಾರ್ಯಕ್ರಮ  ಜರುಗಿತು.

೮. ಚಿಕ್ಕಬಳ್ಳಾಪುರ ಜಿಲ್ಲೆಯ ಭೂರಹಿತ ಪರಿಶಿಷ್ಟರಿಗೆ ಭೂಮಿ ನೀಡಬೇಕು, ಸೇರಿದಂತೆ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ಹಮ್ಮಿಕೊಂಡಿರುವ ಅನಿರ್ದಿಷ್ಟಾವಧಿ ಧರಣಿ ಇಂದು ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಧರಣಿನಿರತ ಸ್ಥಳಕ್ಕೆ ಭೇಟಿ ನೀಡಿ ಮನವಿಪತ್ರ ಸ್ವೀಕರಿಸಿದರು.

********ಮುಕ್ತಾಯ*******